ಆ) ಹೌದು

ಇ) ಈ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ

1576 (1719) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯಲ್ಲಿ ತಾಂತ್ರಿಕ ಕಾಲೇಜುಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ,

ಆ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಚಾಮರಾಜನಗರ ಜಿಲ್ಲೆಯಲ್ಲಿ ಹೊಸ ಇಂಜಿನಿಯರಿಂಗ್ ಕಾಲೇಜನ್ನು ಸ್ಥಾಪಿಸಲು ಉದ್ದೇಶಿಸಿರುವುದಿಲ್ಲ ಆದರೆ ಚಾಮರಾಜನಗರದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಇಂಜಿನಿಯರಿಂಗ್ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿದೆ

ಆ) ಅಗತ್ಯ ಮೂಲಭೂತ ಸೌಕರ್ಯಗಳಾದ ನಿವೇಶನ, ಕಟ್ಟಡ ಇತ್ಯಾದಿಗಳ ಲಭ್ಯತೆ ಮೇರೆಗೆ ಎ ಐ ಸಿ ಟಿ ಇ ಯ ಅನುಮೋದನೆ ಪಡೆದ ನಂತರ ಈ ಬಗ್ಗೆ ಕ್ರಮ ವಹಿಸಲಾಗುವುದು

1577 (1720) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಡಿ ಹೆಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಚಾಮರಾಜನಗರ ಜಿಲ್ಲೆಯ ಈ ಕೆಳಕಂಡ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳಿರುತ್ತವೆ